**ಕರ್ನಾಟಕ ವಿಧಾನ ಪರಿಷತ್ತು**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 934(1034)
2. ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 22.09.2022
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಕೆ.ಎ.ಎಸ್ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ನಿಗದಿಪಡಿಸಲಾಗಿರುವ ಕನ್ನಡ ಪ್ರಥಮ ಪತ್ರಿಕೆಯ ಪಠ್ಯದ ಸಾಹಿತ್ಯ ಚರಿತ್ರೆ ವಿಭಾಗದಲ್ಲಿ ಚಂಪೂ, ವಚನ, ರಗಳೆಗಳಿದ್ದು, ದಾಸ ಸಾಹಿತ್ಯ ಆಶ್ಚರ್ಯಕರ ರೀತಿಯಲ್ಲಿ ಕಾಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ ಗೆಜೆಟೆಡ್ ಪ್ರೊಬೇಷನರ್ಸ್ ಪರೀಕ್ಷೆಗಳಲ್ಲಿ ಎಲ್ಲಾ ಅಭ್ಯರ್ಥಿಗಳಿಗೆ ಆಯ್ಕೆಯಾಗಲು ಸಮಾನ ಅವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಕರ್ನಾಟಕ ಗೆಜೆಟೆಡ್ ಪ್ರೊಬೇಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು, 1997ಗೆ ತಿದ್ದುಪಡಿ ಮಾಡಿ ಕನ್ನಡ ಐಚ್ಛಿಕ ವಿಷಯವು ಒಳಗೊಂಡಂತೆ ಎಲ್ಲಾ ಐಚ್ಛಿಕ ವಿಷಯಗಳನ್ನು ಮುಖ್ಯ ಪರೀಕ್ಷಾ ಪಠ್ಯಕ್ರಮದಿಂದ ತೆಗೆದುಹಾಕಿ ದಿನಾಂಕ: 04.06.2020ರಂದು ಅಧಿಸೂಚನೆಯನ್ನು ಹೊರಡಿಸಲಾಗಿದೆ.<br><br>ಆದರೆ, ಕರ್ನಾಟಕ ಗೆಜೆಟೆಡ್ ಪ್ರೊಬೇಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು, 1997 ರನ್ವಯ ನಡೆಸಲಾಗುವ ಮುಖ್ಯ ಪರೀಕ್ಷೆಯಲ್ಲಿ ಕನ್ನಡ ಭಾಷೆಯ ಅರ್ಹತಾ ಪರೀಕ್ಷೆ ಜಾರಿಯಲ್ಲಿ ಇರುತ್ತದೆ. |
| ಆ | ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಭಕ್ತಿ ಪರಂಪರೆಯಲ್ಲಿ ದಾಸರ ಕೊಡುಗೆ ನಗಣ್ಯವೆ; 'ಕರ್ನಾಟಕ ಸಂಗೀತ ಪಿತಾಮಹ' ಎಂಬ ಹೆಗ್ಗಳಿಕೆಗೆ ಪಾತ್ರರಾದ ಹರಿದಾಸರ ಸಾಹಿತ್ಯವನ್ನು ಇಂದಿನ ಯುವ ಜನತೆಗೆ ಪರಿಚಯಿಸಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ? | |

ಸಂಖ್ಯೆ: ಸಿಆಸುಇ 144 ಎಸ್ಎಸ್‌ಸಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 20/09/2022 07:22 PM